ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 2–1–2021

# ಮಾಧ್ಯಮ ಆಮಂತ್ರಣ

1) 18 ನೇ ಚಿತ್ರಸಂತೆ ***(ಆನ್‌ಲೈನ್)*** ಉದ್ಘಾಟನೆ :

ಶ್ರೀಮತಿ ಸುಧಾ ಮೂರ್ತಿ, ಅಧ್ಯಕ್ಷರು, ಇನ್ಫೋಸಿಸ್ ಫೌಂಡೇಶನ್

ಪ್ರಶಸ್ತಿ ಪ್ರಧಾನ :

ಡಾ : ಸಿ. ಎನ್. ಅಶ್ವಥ್‌ನಾರಾಯಣ, ಉಪ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ವಜ್ರಮಹೋತ್ಸವ ಕಾರ್ಯಕ್ರಮಗಳ ಅನಾವರಣ :

ಎಸ್. ಟಿ. ಸೋಮಶೇಖರ್, ಸಹಕಾರ ಸಚಿವರು

ಆಹ್ವಾನಿತ ಕಲಾವಿದರ ಚಿತ್ರಕಲಾ ಪ್ರದರ್ಶನ ಉದ್ಘಾಟನೆ :

ಡಾ: ಸಿ. ಎನ್. ಮಂಜುನಾಥ್, ನಿರ್ದೇಶಕರು, ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ

ದಿನಾಂಕ : 03–01–2021 ಭಾನುವಾರ ಬೆಳಿಗ್ಗೆ 11–00 ಗಂಟೆಗೆ

ಸ್ಥಳ : ಕರ್ನಾಟಕ ಚಿತ್ರಕಲಾ ಪರಿಷತ್ತು, ಕುಮಾರಕೃಪ ರಸ್ತೆ, ಬೆಂಗಳೂರು –560 001

# ಪತ್ರಿಕಾ ಪ್ರಕಟಣೆ

## ಮುಖ್ಯಮಂತ್ರಿಗಳಿಂದ ಯುವಜನೋತ್ಸವಕ್ಕೆ ವರ್ಚುವಲ್ ಮೂಲಕ ಚಾಲನೆ

ಬೆಂಗಳೂರು, ಡಿಸೆಂಬರ್ 02 (ಕರ್ನಾಟಕ ವಾರ್ತೆ):

ಭಾರತ ಸರ್ಕಾರದ ಯುವ ವ್ಯವಹಾರಗಳು ಮತ್ತು ಕ್ರೀಡಾ ಮಂತ್ರಾಲಯವು ಸ್ವಾಮಿ ವಿವೇಕಾನಂದ ಜಯಂತಿ ಪ್ರಯುಕ್ತ ವರ್ಚ್ಯುವಲ್ ವೇದಿಕೆಯಲ್ಲಿ ಆಯೋಜಿಸಲಾದ 24ನೇ ರಾಷ್ಟ್ರೀಯ ಯುವಜನೋತ್ಸವ ಕಾರ್ಯಕ್ರಮಕ್ಕೆ ರಾಜ್ಯ ತಂಡವನ್ನು ಆಯ್ಕೆ ಮಾಡಲು ರಾಜ್ಯ ಮಟ್ಟದ ಯುವಜನೋತ್ಸವ ಕಾರ್ಯಕ್ರಮಕ್ಕೆ ಗೃಹ ಕಚೇರಿ 'ಕೃಷ್ಣಾ' ದಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪರವರು ವರ್ಚ್ಯುವಲ್ ವೇದಿಕೆಯಲ್ಲಿ ಇಂದು ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿಗಳು ಯುವಜನೋತ್ಸವ ಕಾರ್ಯಕ್ರಮ ರಾಜ್ಯದ ಕಲೆ ಮತ್ತು ಸಾಂಸ್ಕೃತಿಕ ಶ್ರೀಮಂತಿಕೆಯನ್ನು ರಾಷ್ಟ್ರ ಮಟ್ಟದಲ್ಲಿ ಪಸರಿಸಲು ಯುವಜನರಿಗೆ ಉತ್ತಮ ವೇದಿಕೆಯಾಗಿದೆ. ಸ್ವಾಮಿ ವಿವೇಕಾನಂದರ ನುಡಿ, ಆದರ್ಶ ಮತ್ತು ಸಿದ್ಧಾಂತಗಳನ್ನು ಯುವಜನತೆ ಮೈಗೂಡಿಸಿಕೊಳ್ಳಲಿ. ಯುವಜನರು ತಮ್ಮ ಪ್ರತಿಭೆಯ ಮೂಲಕ ರಾಜ್ಯದ ಮತ್ತು ಕನ್ನಡ ಭಾಷೆಯ ಕಂಪನ್ನು ರಾಷ್ಟ್ರ  ಮಟ್ಟದಲ್ಲಿ ಎತ್ತಿಹಿಡಿಯಲಿ. ರಾಜ್ಯ ಸರ್ಕಾರವು ಭಾರತ ಸರ್ಕಾರದ ಮಹಾತ್ವಾಕಾಂಕ್ಷಿ ಕಾರ್ಯಕ್ರಮಗಳಾದ ಖೇಲೋ ಇಂಡಿಯಾ ಮತ್ತು ಫಿಟ್ ಇಂಡಿಯಾ ಯೋಜನೆಗಳ ಅನುಷ್ಠಾನಕ್ಕೆ ಎಲ್ಲಾ ಕ್ರಮಗಳನ್ನು ಕೈಗೊಂಡಿದ್ದು, ಯುವಜನರ ಮತ್ತು ಕ್ರೀಡಾಪಟುಗಳ ಬೆಳವಣಿಗೆಗೆ ಎಲ್ಲಾ ರೀತಿಯ ಬೆಂಬಲ ನೀಡಲು ಸರ್ಕಾರವು ಬದ್ಧವಾಗಿದೆ ಎಂದು ತಿಳಿಸಿದರು.

ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಯವರಾದ ಡಾ. ಶಾಲಿನಿ ರಜನೀಶ್ ಅವರು ತಮ್ಮ  ಪ್ರಾಸ್ತಾವಿಕ ನುಡಿಯಲ್ಲಿ ಯುವಜನೋತ್ಸವ ಕಾರ್ಯಕ್ರಮ ರಾಷ್ಟ್ರದ ವೈವಿಧ್ಯತೆಯಲ್ಲಿ ಏಕತೆಯನ್ನು ಸಾರುವಂಥದ್ದು ಇದು ವೈವಿಧ್ಯಮಯ ಕಲೆ, ಸಂಸ್ಕೃತಿ, ಸಾಹಿತ್ಯ ಮತ್ತು ಭಾಷೆಗಳಲ್ಲಿನ ಶ್ರೀಮಂತಿಕೆಯನ್ನು ಯುವಜನರಿಗೆ ಪರಿಚಯಿಸಲು ಒಂದು ಉತ್ತಮ ಅವಕಾಶ. ದೇಶದ ಮತ್ತು ರಾಜ್ಯದ ಅಭಿವೃದ್ಧಿಗೆ ಯುವಶಕ್ತಿಯ ಕೊಡುಗೆ ಅಗತ್ಯವಾಗಿದೆ. ಪ್ರಸ್ತುತ ಕೋವಿಡ್–19 ಮಾರ್ಗಸೂಚಿಗಳನ್ನು ಅನುಸರಿಸಿ ಜಿಲ್ಲಾ ಮಟ್ಟದ ಕಾರ್ಯಕ್ರಮದಲ್ಲಿ ಸುಮಾರು 6500 ಯುವಜನರು ಪಾಲ್ಗೊಂಡಿದ್ದು, ವಿವಿಧ ಕಲಾಪ್ರಕಾರಗಲ್ಲಿ ಜಿಲ್ಲೆಗಳಲ್ಲಿ ವಿಜೇತರಾದ ಸುಮಾರು ಒಂದು ಸಾವಿರ ಪ್ರತಿಭಾವಂತ ಯುವಜನರ ವಿಡಿಯೋ ರಿಕಾರ್ಡಿಂಗ್‌ಳನ್ನು ಪರಿಣಿತ ತೀರ್ಪುಗಾರರು ಮೌಲ್ಯಮಾಪನ ಮಾಡಿ ರಾಜ್ಯ ತಂಡವನ್ನು ಯವನಿಕಾ ಸಭಾಂಗಣದಲ್ಲಿ ಆಯ್ಕೆ ಮಾಡಲಿದ್ದಾರೆ. ಕೇಂದ್ರ ಸರ್ಕಾರವು 24 ನೇ ಯುವಜನೋತ್ಸವ ಕಾರ್ಯಕ್ರಮಕ್ಕೆ ಯುವಜನರ ಉತ್ಸಾಹ, ಉಲ್ಲಾಸ ಮತ್ತು ಭಾವನೆಗಳನ್ನು ಬಿಂಬಿಸುವ " YUVAAH-Utsah Naye Bharat Ka" ಘೋಷ ವಾಕ್ಯ ನೀಡಿದ್ದು, ಅದರಂತೆ

ಯುವಜನರು ಈ ಒಂದು ಕಾರ್ಯಕ್ರಮದ ಮೂಲಕ ಹೊಸ ವರ್ಷದಲ್ಲಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲಿ ಎಂದು ನುಡಿದರು.

ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿಯವರಾದ ಗೋವಿಂದ ಕಾರಜೋಳ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಯುವ ಕೇಂದ್ರ, ರಾಷ್ಟ್ರೀಯ ಸೇವಾ ಯೋಜನೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತರಾದ ಕೆ. ಶ್ರೀನಿವಾಸ್ ಇವರು ಗಣ್ಯರಿಗೆ ಕೊನೆಯಲ್ಲಿ ವಂದಿಸಿದರು.

# ಸಚಿವರ ಪ್ರವಾಸ

**ಬೆಂಗಳೂರು, ಜನವರಿ 2 (ಕರ್ನಾಟಕ ವಾರ್ತೆ):**

**ಕಂದಾಯ ಸಚಿವ ಆರ್. ಅಶೋಕ್ ಅವರು ಜನವರಿ 3 ರವರೆಗೆ ಶಿವಮೊಗ್ಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

## ಸಾಹಸ ತರಬೇತಿ

**ಬೆಂಗಳೂರು, ಜನವರಿ 2 (ಕರ್ನಾಟಕ ವಾರ್ತೆ):**

**ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿ ವತಿಯಿಂದ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಯುವಕ/ಯುವತಿಯರಿಗೆ ಜನವರಿ 2021 ರಿಂದ ಮಾರ್ಚ್ 2021 ರವರೆಗೆ 3 ತಿಂಗಳುಗಳ ಕಾಲ ಅಕಾಡೆಮಿಯ ಸಾಹಸ ಕ್ರೀಡಾ ಕೇಂದ್ರಗಳಲ್ಲಿ ಸಾಹಸ ತರಬೇತಿ ಶಿಬಿರಗಳನ್ನು ಹಮ್ಮಿಕೊಳ್ಳಲಾಗಿದೆ.**

1. **Rock Climbing Course 2) White Water Kayaking Level-1 3) Wind Surfing Course 4) Sports Climbing Level-I 5) Sports Climbing Level-2 6) Basic River Guide Course 7) Scuba Diving Course 8) White Water Kayaking Level-2 9) Belayers Course 10) Advance River Guide Course 11) Activity**

**Supervisor Course 12) Rock Climbing Workshop 13) Wilderness First Aid Course 14) White Water Rescue Technician Course** ಈ ತರಬೇತಿ ಶಿಬಿರಗಳಿಗೆ ಸಂಬಂಧಿಸಿದ ಅರ್ಹತೆ ಮತ್ತು ಉಳಿದ ಹೆಚ್ಚಿನ ಮಾಹಿತಿಯನ್ನು ಅಕಾಡೆಮಿಯ ವೆಬ್‌ಸೈಟ್ **www.gethnaa.com** ನಲ್ಲಿ ನೀಡಲಾಗಿದೆ. ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಸಂಬಂಧಿಸಿದ ಅರ್ಹತೆಯುಳ್ಳ ಪ್ರಮಾಣ ಪತ್ರದೊಂದಿಗೆ ಆನ್‌ಲೈನ್ ಮುಖಾಂತರ ಅಥವಾ ಅಕಾಡೆಮಿಯ ಕಚೇರಿಗೆ 6–1–2021 ರೊಳಗೆ ಸಲ್ಲಿಸಲು ಅಧಿಕೃತ ಪ್ರಕಟಣೆ ತಿಳಿಸಿದೆ.

ಛಾಯಾಚಿತ್ರ ಶೀರ್ಷಿಕೆ)

ಸತೀಶ್ ಉಪ ನಿರ್ದೇಶಕರು ,ಕೆಜಿಐಡಿ ನಿರ್ದೇಶನಾಲಯ ಬೆಂಗಳೂರು ರವರು ದಿನಾಂಕ 31.12.2020 ರಂದು ವಯೋನಿವೃತ್ತಿ ಹೊಂದಿದರು. ಅವರನ್ನು ಇಲಾಖಾ ವತಿಯಿಂದ ಬೀಳ್ಕೊಡುಗೆ ಸನ್ಮಾನ ಮಾಡಲಾಯಿತು.

**ರಂಗಭೀಷ್ಮ ಆರ್ ಪರಮಶಿವನ್‌ರವರಿಗೆ ಭಾವಪೂರ್ಣ ಶ್ರದ್ಧಾಂಜಲಿ**

**ಬೆಂಗಳೂರು, ಜನವರಿ 1 (ಕರ್ನಾಟಕ ವಾರ್ತೆ):**

ಸಂಗೀತ ಹಾಗು ರಂಗ ಲೋಕದಲ್ಲಿ ಸುವಿಖ್ಯಾತರಾಗಿದ್ದ ರಂಗಭೀಷ್ಮ ಆರ್ ಪರಮಶಿವನ್ ಕರ್ನಾಟಕ ನಾಟಕ ಅಕಾಡೆಮಿ ಸಂತಾಪ ವ್ಯಕ್ತಪಡಿಸಿದೆ ಶ್ರೀಯುತರು ರಾಜ್ಯ ನಾಟಕ ಅಕಾಡೆಮಿ, ಕೇಂದ್ರ ಸಂಗೀತ ನಾಟಕ, ಶ್ರೀ ಗುಬ್ಬಿ ವೀರಣ್ಣ ಪ್ರಶಸ್ತಿಗೆ ಪುರಸ್ಕೃತರಾಗಿದ್ದು ಈ ಜ್ಞಾನಾಂಬುಧಿ ಇಳಿ ವಯಸ್ಸಿನಲ್ಲೂ ಅತ್ಯಂತ ಕಿರಿಯರಿಗೂ ಅಷ್ಟೇ ಆಸ್ಥೆಯಿಂದ ಸಂಗೀತ ನೀಡುತ್ತಿದ್ದರು. ಬಾಲ ನಟರಾಗಿ ರಂಗವೇರಿದ ಅವರು ರಂಗ ಸಂಯೋಜಕರಾಗಿಯೂ ಶಾಸ್ತ್ರೀಯ ಸಂಗೀತ ಲೋಕದಲ್ಲಿ ಪ್ರತಿಷ್ಠಿತ ಹೆಸರು ಮಾಡಿದವರು. ರಂಗಭೂಮಿ, ಚಲನಚಿತ್ರ, ಕಂಪನಿನಾಟಕ ಸಂಗೀತದ ಮೇರು ವ್ಯಕ್ತಿಯು ನಮ್ಮ ನಡುವಿದ್ದರು ಎನ್ನುವುದು ನಮಗೆ ಹೆಮ್ಮೆ, ಎಂದು ನಾಟಕ ಅಕಾಡೆಮಿ ಪ್ರಕಟಣೆ ತಿಳಿಸಿದೆ

**Karnataka State Pollution Control Board**

**ParisaraBhavan, Bengaluru**
**AQI of the CAAQM stations established in Bengaluru City**
**Date :2.1.2021**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 110 | Moderate | $PM_{.10}$ |
| 2 | Jayanagar 5th Block, Shalini ground | 136 | Moderate | $PM_{2.5}$ |
| 3 | KAVIKA, Mysore Road | 114 | Moderate | $PM_{.2.5}$ |
| 4 | Rajeev Gandhi Institute of Chest Disease, NIMHANS, Hombegowda Nagar | 88 | Satisfactory | $PM_{.10}$ |
| 5 | HSR Layout, near Central Silkboard | 103 | Moderate | $PM_{2.5}$ |
| 6 | City Railway Station, Magestic, Bengaluru | 101 | Moderate | $PM_{10}$ |
| 7 | Saneguruvanahalli, NisargaBhavan, KSPCB, Shivanagara | 84 | Satisfactory | $PM_{10}$ |
| 8 | BWSSB, Kadabesanahalli | 160 | Moderate | CO |
| 9 | Peenya | 93 | Satisfactory | $PM_{2.5}$ |
| 10 | BTM Layout | * | * | * |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |

| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
|---|---|---|---|
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |

# ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ

## ಪರಿಸರ ಭವನ, ಬೆಂಗಳೂರು.

### ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ನಿರಂತರ ಪರಿವೇಷ್ಟಕ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು

**ದಿನಾಂಕ: 2.1.2021**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 110 | ಸಾಧಾರಣ | $PM_{.10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 136 | ಸಾಧಾರಣ | $PM_{2.5}$ |
| 3 | ಕವಿಕ, ಮೈಸೂರುರಸ್ತೆ | 114 | ಸಾಧಾರಣ | $PM_{.2.5}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 88 | ತೃಪ್ತಿಕರ | $PM_{.10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 103 | ಸಾಧಾರಣ | $PM_{2.5}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 101 | ಸಾಧಾರಣ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 84 | ತೃಪ್ತಿಕರ | $PM_{10}$ |
| 8 | BWSSB, ಕಾಡಬೀಸನಹಳ್ಳಿ | 160 | ಸಾಧಾರಣ | CO |
| 9 | ಪೀಣ್ಯ | 93 | ತೃಪ್ತಿಕರ | $PM_{2.5}$ |
| 10 | ಬಿಟಿಎಂ ಲೇಔಟ್ | * | * | * |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |

| | |
|---|---|
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |